ಕರ್ನಾಟಕ ಸರ್ಕಾರ

# ವಾರ್ತಾ ಮತ್ತು ಸಾರ್ವಜನಿಕ ಸಂಪರ್ಕ ಇಲಾಖೆ

ವಾರ್ತಾ ಸೌಧ, ಸಂಖ್ಯೆ : 17, ಭಗವಾನ್ ಮಹಾವೀರ ರಸ್ತೆ, ಬೆಂಗಳೂರು – 560 001.

ಸಂಖ್ಯೆ : ವಾಇ : ಜಂ ನಿ : ಸುಮಪ : 2020–21 : ಆಗಸ್ಟ್ 3, 2020

## ಪತ್ರಿಕಾ ಆಮಂತ್ರಣ

1. ಪತ್ರಿಕಾಗೋಷ್ಠಿ

ಬೆಂಗಳೂರು ಅಭಿವೃದ್ಧಿ ಪ್ರಾಧಿಕಾರ ಮತ್ತು ಬೆಂಗಳೂರು ಮಹಾನಗರ ಪ್ರದೇಶಾಭಿವೃದ್ಧಿ ಪ್ರಾಧಿಕಾರ ವ್ಯಾಪ್ತಿಯಲ್ಲಿನ ಅನಧಿಕೃತ ಬಡಾವಣೆ ಕುರಿತು:

ಬಿ. ಜೆ. ಪುಟ್ಟಸ್ವಾಮಿ
ಉಪಾಧ್ಯಕ್ಷರು, ಕರ್ನಾಟಕ ರಾಜ್ಯ ಯೋಜನಾ ಮಂಡಳಿ

ದಿನಾಂಕ : 04–08–2020 ಮಂಗಳವಾರ ಸಮಯ : ಅಪರಾಹ್ನ 12–00 ಗಂಟೆಗೆ
ಸ್ಥಳ : ಕೊಠಡಿ ಸಂಖ್ಯೆ 318, ವಿಕಾಸ ಸೌಧ, ಬೆಂಗಳೂರು

## ಪತ್ರಿಕಾ ಪ್ರಕಟಣೆ

## ಸಚಿವರ ಪ್ರವಾಸ

ಬೆಂಗಳೂರು, ಆಗಸ್ಟ್ 3, (ಕರ್ನಾಟಕ ವಾರ್ತೆ)

ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವ ಎಸ್. ಸುರೇಶ್‌ಕುಮಾರ್ ಅವರು ಜುಲೈ 4 ರಂದು ಚಿಕ್ಕಮಗಳೂರು ಜಿಲ್ಲೆಯಲ್ಲಿ ಪ್ರವಾಸ ಕೈಗೊಂಡು ಅಂದೇ ಕೇಂದ್ರಸ್ಥಾನಕ್ಕೆ ಹಿಂತಿರುಗುವರು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

# ಮುಖ್ಯಮಂತ್ರಿ ಶೀಘ್ರ  ಗುಣಮುಖಕ್ಕೆ ಪ್ರಾರ್ಥನೆ

ಬೆಂಗಳೂರು, ಆಗಸ್ಟ್ 3, (ಕರ್ನಾಟಕ ವಾರ್ತೆ)

ಮುಖ್ಯಮಂತ್ರಿ ಬಿ.ಎಸ್. ಯಡಿಯೂರಪ್ಪ ಅವರು ಕೊರೋನಾ ಸೋಂಕಿನಿಂದ ಆದಷ್ಟು ಬೇಗನೆ ಗುಣಮುಖರಾಗಿ ಮತ್ತೆ ಎಂದಿನಂತೆ ಕರ್ತವ್ಯದಲ್ಲಿ ತೊಡಗಿಕೊಳ್ಳಲಿ ಹಾಗೂ ಅವರ ಕುಟುಂಬದವರಿಗೂ ಸಹ ಯಾವುದೇ ತೊಂದರೆಯಾಗದಿರಲಿ ಎಂದು  ಬಿ. ಜೆ. ಪುಟ್ಟಸ್ವಾಮಿ, ಉಪಾಧ್ಯಕ್ಷರು, ಕರ್ನಾಟಕ ರಾಜ್ಯ ಯೋಜನಾ ಮಂಡಳಿ ಇವರು ದೇವರಲ್ಲಿ ಪ್ರಾರ್ಥಿಸಿದ್ದಾರೆ ಪ್ರಕಟಣೆ ತಿಳಿಸಿದೆ.

# ರಾಜ್ಯಪಾಲರಿಗೆ ಕೊರೋನಾ ನೆಗೆಟಿವ್

ಬೆಂಗಳೂರು, ಆಗಸ್ಟ್ 3, (ಕರ್ನಾಟಕ ವಾರ್ತೆ)

ಕರ್ನಾಟಕ ರಾಜ್ಯ ಮುಖ್ಯ ಮಂತ್ರಿ ಬಿ.ಎಸ್. ಯಡಿಯೂರಪ್ಪ ಮತ್ತು ಗೃಹ ಮಂತ್ರಿ ಬಸವರಾಜ ಬೊಮ್ಮಾಯಿ ಅವರು ಕರ್ನಾಟಕ ರಾಜ್ಯದ ರಾಜ್ಯಪಾಲರನ್ನು ಜುಲೈ 31 ರಂದು ರಾಜಭವನದಲ್ಲಿ ಭೇಟಿಯಾಗಿದ್ದರು. ಪ್ರಸ್ತುತ ಮುಖ್ಯಮಂತ್ರಿ ಅವರಿಗೆ ಕೊರೋನ ಪಾಸಿಟಿವ್ ಬಂದಿರುವುದರಿಂದ ರಾಜಪಾಲರು ಹಾಗೂ ರಾಜ್ಯಪಾಲರ ಎಡಿಸಿ ಅವರುಗಳು ಆಗಸ್ಟ್ 3 ಕೊರೋನಾ ಪರೀಕ್ಷೆ ಮಾಡಿಸಿದ್ದು, ವರದಿಯು ನೆಗೆಟಿವ್ ಬಂದಿರುತ್ತದೆ ಎಂದು ರಾಜಭವನದ ಅಧಿಕೃತ ಪ್ರಕಟಣೆ ತಿಳಿಸಿದೆ.

# ಆರ್‌ಟಿಇ: ಲಾಟರಿ ಪ್ರಕ್ರಿಯೆ ಮೂಲಕ ಆಯ್ಕೆ

ಬೆಂಗಳೂರು, ಆಗಸ್ಟ್ 3, (ಕರ್ನಾಟಕ ವಾರ್ತೆ)

2020–21 ನೇ ಶೈಕ್ಷಣಿಕ ಸಾಲಿನಲ್ಲಿ ಮಕ್ಕಳ ಉಚಿತ ಮತ್ತು ಕಡ್ಡಾಯ ಶಿಕ್ಷಣ ಹಕ್ಕು ಕಾಯಿದೆ ಅಡಿಯಲ್ಲಿ ಖಾಸಗಿ ಅನುದಾನಿತ ಹಾಗೂ ಅನುದಾನ ರಹಿತ ಶಾಲೆಗಳಲ್ಲಿ ಉಚಿತ ಪ್ರವೇಶಕ್ಕಾಗಿ 11466 ಅರ್ಜಿಗಳು ಸ್ವೀಕೃತವಾಗಿದ್ದು, 11026 ಅರ್ಹ ಅರ್ಜಿಗಳನ್ನು ಮೊದಲ ಸುತ್ತಿನ  ಲಾಟರಿಗೆ ಪರಿಗಣಿಸಿ, ದಿನಾಂಕ 29–07–2020 ರಂದು ಮೊದಲನೇ ಸುತ್ತಿನ ಲಾಟರಿಯನ್ನು ಆನ್‌ಲೈನ್ ಮೂಲಕ 5916  ನಡೆಸಿ ಅರ್ಹ ಮಕ್ಕಳನ್ನು ಶಾಲೆಗಳಿಗೆ ಹಂಚಿಕೆ ಮಾಡಲಾಗಿದೆ. ಈ ಲಾಟರಿ ಪ್ರಕ್ರಿಯೆಯಲ್ಲಿ ಆಯ್ಕೆಯಾದ ಮಕ್ಕಳನ್ನು ಶಾಲೆಗಳಲ್ಲಿ ದಾಖಲಾತಿ ಮಾಡಿಕೊಳ್ಳಲಾಗುತ್ತಿದ್ದು, ಶಾಲೆಗಳು ಮಕ್ಕಳನ್ನು ದಾಖಲು ಮಾಡಿಕೊಂಡ ಬಗ್ಗೆ ಆನ್‌ಲೈನ್‌ನಲ್ಲಿ ಅಪ್‌ಡೇಟ್ ಮಾಡಿ ದೃಢೀಕರಣ ಮಾಡಬೇಕಾಗಿರುತ್ತದೆ.  ಈ ರೀತಿ ಮೊದಲ ಸುತ್ತಿನ ಲಾಟರಿಯಲ್ಲಿ ಹಂಚಿಕೆಯಾದ ಮಕ್ಕಳ ದಾಖಲಾತಿ ಬಗ್ಗೆ ಶಾಲೆಗಳವರು ತಮ್ಮ ಶಾಲಾ ಲಾಗಿನ್‌ನಲ್ಲಿ ಅಪ್‌ಡೇಟ್ ಮಾಡಿ

ಧೃಢೀಕರಿಸಿದ ನಂತರ 2 ನೇ ಸುತ್ತಿನ ಲಾಟರಿ ಪ್ರಕ್ರಿಯೆಯನ್ನು ನಡೆಸಲಾಗುವುದು ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## ಬೆಂಗಳೂರಿನಲ್ಲಿ ಸುಸಜ್ಜಿತ ಸ್ವರ್ಣ ಮಹೋತ್ಸವ ಗ್ರಂಥಾಲಯ ಭವನ ನಿರ್ಮಾಣ: ಸುರೇಶ್‌ಕುಮಾರ್

**ಬೆಂಗಳೂರು, ಆಗಸ್ಟ್ 3, (ಕರ್ನಾಟಕ ವಾರ್ತೆ)**

ರಾಜಧಾನಿ ಬೆಂಗಳೂರಿನ ಕಬ್ಬನ್ ಪಾರ್ಕ್‌ನಲ್ಲಿರುವ ರಾಜ್ಯ ಕೇಂದ್ರ ಗ್ರಂಥಾಲಯಕ್ಕೆ ನೂರು ವರ್ಷ ತುಂಬುತ್ತಿರುವ ಹಿನ್ನೆಲೆಯಲ್ಲಿ ಬೆಂಗಳೂರಿನಲ್ಲಿ ಸುಸಜ್ಜಿತವಾದ ಸುವರ್ಣ ಮಹೋತ್ಸವ ಗ್ರಂಥಾಲಯ ಭವನವನ್ನು ನಿರ್ಮಿಸಲಾಗುವುದುಎಂದು ಪ್ರಾಥಮಿಕ ಮತ್ತು ಪ್ರೌಢಶಿಕ್ಷಣ ಸಚಿವಎಸ್. ಸುರೇಶ್‌ಕುಮಾರ್ ಹೇಳಿದ್ದಾರೆ.

ಸೋಮವಾರ ಬೆಂಗಳೂರಿನ ಬಿಟಿಎಂ ಬಡಾವಣೆಯ 2ನೇ ಹಂತದಲ್ಲಿ ನೂತನ ಗ್ರಂಥಾಲಯ ಕಟ್ಟಡ ಉದ್ಘಾಟನೆ ನೆರವೇರಿಸಿ ಮಾತನಾಡಿದ ಅವರು, ಇತರೆ ರಾಜ್ಯಗಳಲ್ಲಿ ಇರುವ ಗ್ರಂಥಾಲಯ ವ್ಯವಸ್ಥೆಯನ್ನು ಅವಲೋಕಿಸಿ ಎಲ್ಲ ವರ್ಗದ ಓದುಗರಿಗೆ ಅನುಕೂಲವಾಗುವ ರೀತಿಯಲ್ಲಿ ಮಾದರಿ ಸುವರ್ಣ ಮಹೋತ್ಸವ ಗ್ರಂಥಾಲಯ ನಿರ್ಮಾಣ ಮಾಡಲಾಗುವುದು ಎಂದರು.

ಗ್ರಂಥಾಲಯದೊಂದಿಗಿನ ತಮ್ಮ ಸಂಬಂಧವನ್ನು ನೆನಪಿಸಿಕೊಂಡ ಸಚಿವರು, "ನನ್ನ ಜೀವನದಲ್ಲಿ ನಾನೇನಾದರೂ ಸಾಧನೆ ಮಾಡಿದ್ದಾದರೆ ಅದರೆ ಎಲ್ಲ ಶ್ರೇಯಸ್ಸು ಸಾರ್ವಜನಿಕ ಗ್ರಂಥಾಲಯಕ್ಕೆ ಅರ್ಪಿತವಾಗಬೇಕು. ಗ್ರಂಥಾಲಯದ ಓದಿನ ಮೂಲಕವೇ ನಾನು ಕಾನೂನು ಪದವಿ ಪಡೆಯುವಂತಾಯಿತು. ಗ್ರಂಥಾಲಯ ಎಂಬುದು ಶ್ರೀಸಾಮಾನ್ಯನ ಒಂದು ವಿಶ್ವವಿದ್ಯಾಲಯವಿದ್ದಂತೆ" ಎಂದು ಅಭಿಪ್ರಾಯಪಟ್ಟರು.

ತಾವು ಸಚಿವರಾಗಿ ಅಧಿಕಾರ ವಹಿಸಿಕೊಂಡ ನಂತರ ಇಂದಿನ ಅವಶ್ಯಕತೆಗಳಿಗೆ ಅನುಗುಣವಾಗಿ ಡಿಜಿಟಲ್ ಗ್ರಂಥಾಲಯಗಳನ್ನು ರಾಜ್ಯಾದ್ಯಂತ ಸ್ಥಾಪಿಸಲು ಕ್ರಮ ವಹಿಸಲಾಗಿದೆ. ಕಳೆದ ಆರು ತಿಂಗಳ ಅವಧಿಯಲ್ಲಿ ರಾಜ್ಯದೆಲ್ಲೆಡೆ 272 ಡಿಜಿಟಲ್ ಗ್ರಂಥಾಲಯಗಳು ಕಾರ್ಯಾರಂಭ ಮಾಡಿದ್ದು, ಇಡೀ ದೇಶದಲ್ಲಿ ಇದು ಅಭೂತ ಪ್ರಯತ್ನವಾಗಿದೆ ಎಂದು ಸುರೇಶ್‌ಕುಮಾರ್ ಹೇಳಿದರು. ಕೋವಿಡ್ ಸೃಷ್ಟಿಸಿದ ಸಾಮಾಜಿಕ ಪರಿಸ್ಥಿತಿಯ ಹಿನ್ನೆಲೆಯಲ್ಲಿ ರಾಷ್ಟ್ರದಲ್ಲಿಯೇ ಮೊದಲ ಉಪಕ್ರಮವಾಗಿ ಕರ್ನಾಟಕ ರಾಜ್ಯದ ಸಾರ್ವಜನಿಕ ಗ್ರಂಥಾಲಯ ಇಲಾಖೆ ಡಿಜಿಟಲ್ ಗ್ರಂಥಾಲಯ ಮೊಬೈಲ್ ಆಪ್‌ನ್ನು ಲೋಕಾರ್ಪಣೆಗೊಳಿಸಿದ್ದು, ಇಂದು ಮೂರು ಲಕ್ಷಕ್ಕೂ ಹೆಚ್ಚು ಜನ ಈ ಆಪ್ ಬಳಸುತ್ತಿದ್ದಾರೆ. ಒಂದು ಲಕ್ಷಕ್ಕೂ ಮೀರಿದ ಪುಸ್ತಕಗಳು ಈ ಆಪ್‌ನಲ್ಲಿ ಲಭ್ಯವಿವೆ ಎಂದುಅವರು ಹೇಳಿದರು.

ಪುಸ್ತಕ ಸಂಸ್ಕೃತಿ ಬೆಳೆಸಲು ರಾಜ್ಯಾದ್ಯಂತ 6841 ಗ್ರಂಥಾಲಯಗಳು ಕಾರ್ಯನಿರ್ವಹಿಸುತ್ತಿದ್ದು, ಇದು ದೇಶದಲ್ಲಿಯೇ ಮಾದರಿ ಗ್ರಂಥಾಲಯ ವ್ಯವಸ್ಥೆ ಎಂಬ ಹೆಗ್ಗಳಿಕೆಗೆ ಪಾತ್ರವಾಗಿದೆ. ಮುಂದಿನ ದಿನಗಳಲ್ಲಿ ಎಲ್ಲ ವರ್ಗದ ಜನರ ಜ್ಞಾನಾರ್ಜನೆಗೆ ಉಪಯೋಗವಾಗುವಂತೆ ಗ್ರಂಥಾಲಯಗಳನ್ನು ಅವಶ್ಯಕ ಸೇವೆಗಳನ್ನು ಒದಗಿಸಲುಕ್ರಮ ಕೈಗೊಳ್ಳಲಾಗುವುದು ಎಂದು ಸುರೇಶ್‌ಕುಮಾರ್ ಹೇಳಿದರು.

ಇದೇ ಸಂದರ್ಭದಲ್ಲಿ ಸಚಿವರು ಡಿಜಿಟಲ್ ಗ್ರಂಥಾಲಯ ಉದ್ಘಾಟನೆ ನೆರವೇರಿಸಿದರು. ಶಾಸಕ ರಾಮಲಿಂಗಾರೆಡ್ಡಿ ಸಮಾರಂಭದ ಅಧ್ಯಕ್ಷತೆ ವಹಿಸಿದ್ದರು. ಲೋಕಸಭಾ ಸದಸ್ಯ ತೇಜಸ್ವಿ ಸೂರ್ಯ, ವಿಧಾನಸಭೆ ಸದಸ್ಯೆ ಸೌಮ್ಯರೆಡ್ಡಿ, ಬಿಬಿಎಂಪಿ ಸದಸ್ಯ ದೇವದಾಸ್, ಇಲಾಖೆ ಅಧಿಕಾರಿಗಳು ಭಾಗವಹಿಸಿದ್ದರು.
ಗ್ರಂಥಾಲಯ ಇಲಾಖೆ ನಿರ್ದೇಶಕ ಡಾ. ಸತೀಶಕುಮಾರ್ ಎಸ್. ಹೊಸಮನಿ ಸ್ವಾಗತಿಸಿದರು.

## ಕರ್ನಾಟಕ ಲೋಕಸೇವಾ ಆಯೋಗದಿಂದ ಇಲಾಖಾ ಪರೀಕ್ಷೆ

**ಬೆಂಗಳೂರು, ಆಗಸ್ಟ್ 3, (ಕರ್ನಾಟಕ ವಾರ್ತೆ)**

ಕರ್ನಾಟಕ ಲೋಕಸೇವಾ ಆಯೋಗವು 2020 ನೇ ಸಾಲಿನಲ್ಲಿ ಪ್ರಥಮ ಅಧಿವೇಶನದ ಇಲಾಖಾ ಪರೀಕ್ಷೆಗಳನ್ನು ದಿನಾಂಕ 18–08–2020 ರಿಂದ 16–09–2020 ವರೆಗೆ ಮೂರು ಹಂತಗಳಲ್ಲಿ ನಡೆಸಲು ನಿಗದಿಪಡಿಸಿದ್ದು, ಪರೀಕ್ಷಾ ವೇಳಾಪಟ್ಟಿಯನ್ನು ಆಯೋಗದ ವೆಬ್‍ಸೈಟ್ http://kpsc.kar.nic.in ನಲ್ಲಿ ವೀಕ್ಷಿಸಬಹುದು ಎಂದು ಕಾರ್ಯದರ್ಶಿ, ಕರ್ನಾಟಕ ಲೋಕಸೇವ ಆಯೋಗ ಅವರು ಪ್ರಕಟಣೆಯಲ್ಲಿ ತಿಳಿಸಿದೆ.

## ಸಾರ್ವಜನಿಕರಿಗೆ ಮೃಗಾಲಯದ ವೀಕ್ಷಣೆಗೆ ಅವಕಾಶ

**ಬೆಂಗಳೂರು, ಆಗಸ್ಟ್ 3, (ಕರ್ನಾಟಕ ವಾರ್ತೆ)**

ಕೋವಿಡ್–19ರ ಪ್ರಯುಕ್ತ ಸರ್ಕಾರದ ಆದೇಶದಂತೆ ಶ್ರೀ ಚಾಮರಾಜೇಂದ್ರ ಮೃಗಾಲಯ ಹಾಗೂ ಕಾರಂಜಿ ಕೆರೆ ಪ್ರಕೃತಿ ಉದ್ಯಾನವನಕ್ಕೆ ವೀಕ್ಷಕರ ವೀಕ್ಷಣೆಗೆ ಭಾನುವಾರಗಳನ್ನು ನಿರ್ಭಂಧಗೊಳಿಸಿ, ಪ್ರತಿ ಮಂಗಳವಾರ ವೀಕ್ಷಣೆಗೆ ತೆರೆಯಲಾಗಿತ್ತು.

ಆಗಸ್ಟ್ 2, 2020 ರಿಂದ ಯಥಾಪ್ರಕಾರ ಮೃಗಾಲಯದ ವಾರದ ರಜೆಯಾದ ಮಂಗಳವಾರಗಳಂದು ಮೃಗಾಲಯವನ್ನು ವೀಕ್ಷಕರ ವೀಕ್ಷಣೆಗೆ ನಿರ್ಭಂಧಗೊಳಿಸಿ, ಪ್ರತಿ ಭಾನುವಾರ ವೀಕ್ಷಕರ ವೀಕ್ಷಣೆಗೆ ತೆರೆಯಲಾಗುವುದೆಂದು ಅಧಿಕೃತ ಪ್ರಕಟಣೆ ತಿಳಿಸಿದೆ.

## “ತೋಟಗಾರಿಕೆ ದಿನ” ಆಚರಣೆ

**ಬೆಂಗಳೂರು, ಆಗಸ್ಟ್ 3, (ಕರ್ನಾಟಕ ವಾರ್ತೆ)**

ತೋಟಗಾರಿಕೆ ಪಿತಾಮಹ ದಿವಂಗತ ಡಾ.ಎಂ.ಹೆಚ್. ಮರಿಗೌಡ ಅವರ ಜನ್ಮದಿನವಾದ ಆಗಸ್ಟ 8 ರಂದು ತೋಟಗಾರಿಕೆ ದಿನವನ್ನಾಗಿ ಆಚರಿಸಲಾಗುತ್ತದೆ.

**ರಾಜ್ಯದ ಎಲ್ಲಾ ಜಿಲ್ಲಾ ತೋಟಗಾರಿಕೆ ಕಛೇರಿಗಳಲ್ಲಿ ತೋಟಗಾರಿಕೆ ದಿನಾಚರಣೆಯಂದು ವಿಶೇಷ ಕಾರ್ಯಕ್ರಮಗಳನ್ನು ಆಯೋಜಿಸಲಾಗುತ್ತಿದೆ ಎಂದು ಅಧಿಕೃತ ಪ್ರಕಟಣೆ ತಿಳಿಸಿದೆ.**

## ಮಹಿಳಾ ಹಕ್ಕುಗಳ ರಕ್ಷಣೆ ಕುರಿತು ವೆಬಿನಾರ್

**ಬೆಂಗಳೂರು, ಆಗಸ್ಟ್ 3, (ಕರ್ನಾಟಕ ವಾರ್ತೆ)**

ರಾಷ್ಟ್ರೀಯ ಸೇವಾ ಯೋಜನೆ ಬೆಂಗಳೂರು ವಿಶ್ವವಿದ್ಯಾಲಯ ಹಾಗೂ ಸುರಾನ ಕಾಲೇಜು ವತಿಯಿಂದ ಒಂದು ದಿನದ ಕೋವಿದ 19ರ ಸಂದರ್ಭದಲ್ಲಿ ಮಹಿಳಾ ಹಕ್ಕುಗಳ ರಕ್ಷಣೆ ಎಂಬ ರಾಷ್ಟ್ರೀಯ ವೆಬಿನಾರ್ ಕಾರ್ಯಕ್ರಮದ ಉದ್ಘಾಟನೆಯನ್ನು ವಿಶ್ವವಿದ್ಯಾಲಯದ ಕುಲಪತಿ ಗಳಾದ ಪ್ರೊ. ಕೆ.ಆರ್. ವೇಣುಗೋಪಾಲ್ ರವರು ಉದ್ಘಾಟಿಸಿದರು.

ಉದ್ಘಾಟನಾ ಭಾಷಣ ಮಾಡಿದ ಪ್ರೊ.ವೇಣುಗೋಪಾಲ್ ಅವರು, ಕೋವಿಡ್ 19 ರ ಸಂದರ್ಭದಲ್ಲದೆ, ಸಾಮಾನ್ಯ ಸಂದರ್ಭಗಳಲ್ಲೂ ಮಹಿಳೆಯರ ಸ್ಥಿತಿಗತಿ ಚಿಂತಾಜನಕವಾಗಿದೆ. ಮಹಿಳೆ ನಾಗರಿಕತೆಯ ಕೇಂದ್ರಬಿಂದು ಆಗಿದ್ದರೂ, ಪುರುಷರು ಮಹಿಳಾ ಹಕ್ಕುಗಳನ್ನು ಉಲ್ಲಂಘನೆ ಮಾಡುತ್ತಿರುವುದು ದುರದೃಷ್ಟಕರ ಸಂಗತಿ. ಜಮ್ಮು-ಕಾಶ್ಮೀರ ಉಚ್ಚ ನ್ಯಾಯಾಲಯದಲ್ಲಿ ಕೋವಿಡ್ 19 ರ ಸಂದರ್ಭದಲ್ಲಿ ದವಸ ದಾನ್ಯಗಳನ್ನು ತರಲು ಹೊರಗೆ ಹೋಗುವ ಮಹಿಳೆಯರಿಗೆ ಭದ್ರತೆಯನ್ನು ಸರ್ಕಾರಗಳು ನೀಡಬೇಕು ಹಾಗೂ ಇಂತಹ ಸಂದರ್ಭದಲ್ಲಿ ಆಗುವ ಲೈಂಗಿಕ ಶೋಷಣೆ ತಡೆಗಟ್ಟಬೇಕು ಎಂದು ತಿಳಿಸಿರುವ ತೀರ್ಪನ್ನು ಕಟ್ಟುನಿಟ್ಟಾ ಎಲ್ಲ ರಾಜ್ಯಗಳು ಅನುಷ್ಠಾನಗೊಳಿಸಬೇಕು ಎಂದು ತಿಳಿಸಿದರು.

ಮಾನಸಿಕವಾಗಿ ಹಾಗೂ ದೈಹಿಕವಾಗಿ ಕುಗ್ಗಿರುವ ಮಹಿಳೆಯರನ್ನು ಸಂತೈಸುವ ಕೆಲಸವನ್ನು ರಾಜ್ಯ ಮಹಿಳಾ ಆಯೋಗಗಳು ಮಾಡಬೇಕು ಎಂದು ತಿಳಿಸಿದರು.ಸಾರ್ವಜನಿಕರು ದೊಡ್ಡ ದೊಡ್ಡ ಮಟ್ಟದಲ್ಲಿ ವಿವಾಹಗಳನ್ನು ಏರ್ಪಡಿಸಿದಾಗ ವಧುವಿನ ತಂದೆ ಸಾಕಷ್ಟು ಹಣವನ್ನು ಸಾವಿರಾರು ಜನರನ್ನು ಕರೆಸಿ ವ್ಯಯ ಮಾಡಬೇಕಿತ್ತು. ಆದರೆ ಕರೋನಾ ಸಂದರ್ಭದಲ್ಲಿ ಕೇವಲ ಐವತ್ತು ಜನರನ್ನು ಕರೆಯಿಸಿ ವಿವಾಹಗಳು ನಡೆಸುತ್ತಿರುವುದು ಒಂದು ಧನಾತ್ಮಕ ಚಿಂತನೆ ಹಾಗೂ ಬೆಳವಣಿಗೆ ಎಂದು ತಿಳಿಸಿದರು.

ಐಪಿಎಸ್ ಅಧಿಕಾರಿ ಡಿ ರೂಪ ರವರು ಮಾತನಾಡುತ್ತಾ,ಈ ಕರೋನಾ ಸಂದರ್ಭದಲ್ಲಿ ಮನೆಗೆಲಸ ಮಾಡುವ ಮಹಿಳೆಯರು, ಮಹಿಳಾ ಬೀದಿ ವ್ಯಾಪಾರಿಗಳು ಹಾಗೂ ಅಸಂಘಟಿತ ವಲಯದಲ್ಲಿ ಕೆಲಸ ಮಾಡುತ್ತಿರುವ ಮಹಿಳೆಯರ ಉದ್ಯೋಗ ಸ್ಥಿತಿ ಚಿಂತಾಜನಕವಾಗಿದ್ದು, ಮಾನಸಿಕವಾಗಿ ಹಾಗೂ ದೈಹಿಕವಾಗಿ ತೊಂದರೆಯಿಂದ ಬಳಲುತ್ತಿದ್ದಾರೆ. ಈ ಸಂದರ್ಭದಲ್ಲಿ ನಮ್ಮ ಪೊಲೀಸರು ಕೌಟುಂಬಿಕ ದೌರ್ಜನ್ಯಗಳ ಪ್ರಕರಣಗಳನ್ನು ತೆಗೆದುಕೊಳ್ಳಲು ತುಂಬಾ ಕಷ್ಟವಾಗುತ್ತಿದೆ. ಕಾರಣ , ನಮ್ಮ ಎಲ್ಲಾ ಕರೋನ ವಾರಿಯರ್ಸ್ ಆದ ಪೊಲೀಸರು ಕೋವಿಡ್ ಕರ್ತವ್ಯದಲ್ಲಿ ನಿರಂತರವಾಗಿ ನಿರತರಾಗಿರುವುದು ಶ್ಲಾಘನೀಯ. ಈ ಒಂದು ಸನ್ನಿವೇಶವನ್ನು ಪುರುಷರು ದುರ್ಬಳಕೆ ಮಾಡಿಕೊಳ್ಳಬಾರದು ಎಂದು ಎಚ್ಚರ ಮಾತುಗಳನ್ನು ಆಡಿದರು. ಹಾಗೂ ಬಹುಮುಖ್ಯವಾಗಿ ಮದ್ಯಪಾನ ಕುಡಿದು ಬಂದ ಪುರುಷ ವರ್ಗದವರು ಮಹಿಳೆಯರನ್ನು ದೈಹಿಕವಾಗಿ ಹಿಂಸಿಸುವುದರಿಂದ, ಅವರನ್ನು ಮಾನಸಿಕವಾಗಿ ಹಾಗೂ ದೈಹಿಕವಾಗಿ ಘಾಸಿ ಪಡಿಸಿ ದಂತಾಗಿದೆ ಎಂದು ತಿಳಿಸಿದರು.

ಎ.ಸಿ.ಪಿ. ರೀನ ಸುವರ್ಣ ನವರು ಮಾತನಾಡುತ್ತಾ ಕೌಟುಂಬಿಕ ದೌರ್ಜನ್ಯ ಸಂಬಂಧ ಬರುವ ಪ್ರಕರಣಗಳನ್ನು ನಾವು ನೋಂದಣಿ ಮಾಡುವ ಸಂದರ್ಭದಲ್ಲಿ ಕುಟುಂಬದವರನ್ನು

ಕರೆಸಲು ಕಷ್ಟಸಾಧ್ಯವಾಗುತ್ತಿದೆ. ಕಾರಣ, ಈ ಕರೋನಾ ವೈರಸ್ ಭೀತಿಯಿಂದಾಗಿ. ಹಾಗಾಗಿ ಪುರುಷರು ಮಹಿಳೆಯರನ್ನು ರಕ್ಷಿಸುವಂತಹ ಕೆಲಸ ಮಾಡಬೇಕಾಗಿದೆ ಎಂದು ತಿಳಿಸಿದರು. ಬಹುಮುಖ್ಯವಾಗಿ, ಆಸ್ಪತ್ರೆಗಳಲ್ಲಿ ಮಹಿಳಾ ಕೋವಿಡ್ ಪಾಸಿಟಿವ್ ರೋಗಿಗಳಿಗೆ ಪ್ರತ್ಯೇಕ ಕೊಠಡಿಗಳನ್ನು ನೀಡದಿರುವುದು ಮಹಿಳೆಯರ ಅಂತಸ್ತಿಗೆ ದಕ್ಕೆ ತರುವ ಹಾಗಿದೆ ಎಂದು ತಿಳಿಸಿದರು.

ಸಂಯೋಜನಾಧಿಕಾರಿ ಎನ್ ಸತೀಶ್ ಗೌಡರವರು ಮಾತನಾಡುತ್ತಾ, ಮಹಿಳೆಯರ ಸಂಬಂಧ ದೇಶದಲ್ಲಿ ಹಲವಾರು ಕಾನೂನುಗಳಿದ್ದರೂ ಅವುಗಳ ಸಮರ್ಪಕ ಅನುಷ್ಠಾನ ಆಗದಿರುವುದು ಸಂವಿಧಾನದ ಮೂಲ ಆಶಯಗಳನ್ನು ತಿರುಚಿ ದಂತಾಗಿದೆ. ರಾಜ್ಯ ಮಹಿಳಾ ಆಯೋಗ ಹಾಗೂ ಸಂಬಂಧಪಟ್ಟ ಮಹಿಳಾ ಹಾಗೂ ಮಕ್ಕಳ ಸಂರಕ್ಷಣಾಧಿಕಾರಿಗಳು, ದೈಹಿಕ ಮತ್ತು ಮಾನಸಿಕ ತೊಂದರೆಗೆ ಒಳಗಾಗುತ್ತಿರುವ ಮಹಿಳೆಯರನ್ನು ಸ್ವಯಿಚ್ಛೆಯಿಂದ ಮುಂದೆ ಬಂದು ರಕ್ಷಿಸಬೇಕಾದ ಅನಿವಾರ್ಯತೆ ಇದೆ ಎಂದು ತಿಳಿಸಿದರು.

ಕಾರ್ಯಕ್ರಮದ ಅಧಿವೇಶನದ ಅಧ್ಯಕ್ಷತೆಯನ್ನು ವಹಿಸಿದ್ದ ಪ್ರೊಫೆಸರ್ ಕೆಬಿ ವಾಸುದೇವರವರು ಮಹಿಳಾ ಸಂಬಂಧಪಟ್ಟ ಹಲವಾರು ಕಾನೂನುಗಳ ಬಗ್ಗೆ ಹಾಗೂ ಲಿಂಗ ತಾರತಮ್ಯಗಳ ವಿಚಾರವಾಗಿ ಕೂಲಂಕುಶವಾಗಿ ತಮ್ಮ ಅಧ್ಯಕ್ಷ ಭಾಷಣದಲ್ಲಿ ತಿಳಿಸಿದರು.

ಸಂಪನ್ಮೂಲ ವ್ಯಕ್ತಿಗಳಾಗಿ ತಮಿಳ್ ನಾಡು ರಾಷ್ಟ್ರೀಯ ಕಾನೂನು ಶಾಲೆಯ ಹಿರಿಯ ಪ್ರಾಧ್ಯಾಪಕರಾದ ಡಾ. ಅನುಜ ಎಸ್. ಹಾಗೂ ವಿ.ವಿ ಪುರ ಕಾನೂನು ಕಾಲೇಜಿನ ಸಹಾಯಕ ಪ್ರಾಧ್ಯಾಪಕರಾದ ಡಾ. ಜಿ.ಎಸ್. ಸಂಜೀವ ಗೌಡ ಉಪಸ್ಥಿತರಿದ್ದರು. ಸುರಾನ ಕಾಲೇಜಿನ ಪ್ರಾಂಶುಪಾಲರಾದ ಡಾ. ಭವಾನಿ ಸ್ವಾಗತವನ್ನು ನೆರವೇರಿಸಿದರೆ, ಶ್ರೀ ಗಿರೀಶ್ ಕಾರ್ಯಕ್ರಮದ ವಂದನಾರ್ಪಣೆಯನ್ನು ನಡೆಸಿಕೊಟ್ಟರು. ದೇಶದ ಎಲ್ಲಾ ಭಾಗಗಳಿಂದ ಸುಮಾರು ಐನೂರಕ್ಕೂ ಹೆಚ್ಚಿನ ಪ್ರಾಧ್ಯಾಪಕರು , ಎನ್ಎಸ್ಎಸ್ ಕಾರ್ಯಕ್ರಮ ಅಧಿಕಾರಿಗಳು, ವಿದ್ಯಾರ್ಥಿಗಳು ಹಾಗೂ ಮಹಿಳಾ ಸಂಘಟನೆಗಳು ಭಾಗವಹಿಸಿದ್ದವು.

ಚಿತ್ರದಲ್ಲಿ ಪ್ರೊಫೆಸರ್ ವೇಣುಗೋಪಾಲ್ ರವರು ಕುಲಪತಿಗಳು ಬೆಂಗಳೂರು ವಿಶ್ವವಿದ್ಯಾಲಯ, ಐಪಿಎಸ್ ಅಧಿಕಾರಿ ಡಿ.ರೂಪ , ಎ.ಸಿ.ಪಿ. ರೀನಾ ಸುವರ್ಣ ಹಾಗೂ ಎನ್ಎಸ್ಎಸ್ ಸಂಯೋಜನಾಧಿಕಾರಿ ಡಾಕ್ಟರ್ ಎನ್. ಸತೀಶ್ ಗೌಡ ಉಪಸ್ಥಿತರಿದ್ದಾರೆ